## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಕೆ ನಾಗರಾಜಪ್ಪ, ಅಧ್ಯಕ್ಷರು, ಟಿ.ಗೋಪಗೊಂಡನಹಳ್ಳಿ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಾವಣಗೆರೆ ಜಿಲ್ಲಾ ಪಂಚಾಯತಿ ಇವರ ಪತ್ರ ಸಂಖ್ಯೆ: ಜಿಪಂದಾ:ಆಭಿ(4):ವಸತಿ:ಸಿಆರ್:62/2017-18, ದಿನಾಂಕ:29-05-2017.
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್ ದಿನಾಂಕ:17-07-2017.
3) ಶ್ರೀ ಕೆ ನಾಗರಾಜಪ್ಪ, ಅಧ್ಯಕ್ಷರ ಲಿಖಿತ ಹೇಳಿಕೆ ದಿನಾಂಕ:31-07-2017.
4) ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:06-12-2017.

**ಪ್ರಸ್ತಾವನೆ:**

ದಾವಣಗೆರೆ ಜಿಲ್ಲೆ, ಹೊನ್ನಾಳಿ ತಾಲ್ಲೂಕು, ಟಿ.ಗೋಪಗೊಂಡನಹಳ್ಳಿ ಗ್ರಾಮ ಪಂಚಾಯತಿಯ ಹಾಲಿ ಅಧ್ಯಕ್ಷರಾದ ಶ್ರೀ ಕೆ ನಾಗರಾಜಪ್ಪನವರು ಈ ಹಿಂದಿನ ಅವಧಿಯಲ್ಲಿ ಗ್ರಾಮ ಪಂಚಾಯತಿಯ ಸದಸ್ಯರಾಗಿದ್ದ ಸಂದರ್ಭದಲ್ಲಿ ಅವರ ಪತ್ನಿಯಾದ ಶ್ರೀಮತಿ ಅಂಬುಜಮ್ಮ ಕೋಂ ನಾಗರಾಜಪ್ಪ ಇವರಿಗೆ 2008-09ನೇ ಸಾಲಿನಲ್ಲಿ ಆಶ್ರಯ ವಸತಿ ಯೋಜನೆಯಡಿಯಲ್ಲಿ ಮನೆ ಮಂಜೂರಾಗಿದ್ದು ರೂ.40,000/-ಗಳನ್ನು ಪಡೆದಿದ್ದು ಪುನಃ 2010-11ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಮನೆ ಮಂಜೂರು ಮಾಡಿಸಿಕೊಂಡು ರೂ.74,500/-ಗಳನ್ನು ಪಡೆದಿರುತ್ತಾರೆ. ಹಾಗೂ ನಾಗರಾಜಪ್ಪನವರ ಮೂವರು ತಮ್ಮಂದಿರ ಹೆಂಡತಿಯವರಿಗೆ ವಿವಿಧ ವಸತಿ ಯೋಜನೆಯಡಿ ಮನೆ ಮಂಜೂರು ಮಾಡಲಾಗಿದೆ. ಇವರು ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ 1993ರ ಪ್ರಕರಣ 53(4)ರಡಿ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಹಣಕಾಸಿನ ಹಿತಾಸಕ್ತಿ ಹೊಂದಿರುವುದಾಗಿ ಕಾರ್ಯನಿವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊನ್ನಾಳಿ ಯವರು ವರದಿ ಸಲ್ಲಿಸಿರುತ್ತಾರೆ. ಶ್ರೀ ಕೆ ನಾಗರಾಜಪ್ಪ ರವರು ಟಿ.ಗೋಪಗೊಂಡನಹಳ್ಳಿ ಗ್ರಾಮ ಪಂಚಾಯತಿಯಲ್ಲಿ ಹಾಲಿ ಅಧ್ಯಕ್ಷರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಇವರ ಸದಸ್ಯತ್ವದ ಅವಧಿಯಲ್ಲಿ ಸರ್ಕಾರದ ಮಾರ್ಗಸೂಚಿಯನ್ನು ಉಲ್ಲಂಘಿಸಿ ಪರೋಕ್ಷವಾಗಿ ಅಧಿಕಾರ ದುರುಪಯೋಗಕ್ಕೆ ಕಾರಣರಾಗಿರುವುದರಿಂದ ಇವರ ಮೇಲೆ ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ 1993ರಪ್ರಕರಣ 43(ಎ) ಮತ್ತು 48(4)ರಡಿ ಕ್ರಮ ಜರುಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರಲ್ಲಿ ಶ್ರೀ ಕೆ ನಾಗರಾಜಪ್ಪ ರವರಿಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 43(ಎ) ಮತ್ತು 48(4) ಅಡಿ ಕ್ರಮ ಜರುಗಿಸುವ ಸಲುವಾಗಿ ಸದರಿಯವರಿಗೆ ದಿನಾಂಕ:17-07-2017 ರಂದು ಕಾರಣ ಕೇಳಿ ನೋಟೀಸ್ ನೀಡಲಾಗಿದೆ.

ಅದರಂತೆ ಮೇಲೆ ಓದಲಾದ (3)ರಲ್ಲಿ ಶ್ರೀ ಕೆ ನಾಗರಾಜಪ್ಪ ಇವರು ಸರ್ಕಾರದಿಂದ ನೀಡಲಾದ ಕಾರಣ ಕೇಳಿ ನೋಟೀಸಿಗೆ ಕೆಳಗಿನಂತೆ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

> "ನನ್ನ ಹೆಂಡತಿ ಅಂಬುಜಮ್ಮನವರಿಗೆ 2008-09ನೇ ಸಾಲಿನಲ್ಲಿ ಗ್ರಾಮೀಣ ಆಶ್ರಯ ಯೋಜನೆಯ ಅಡಿಯಲ್ಲಿ ಫಲಾನುಭವಿಯನ್ನಾಗಿ ನಿಯಮಾವಳಿಯಂತೆ ಆಯ್ಕೆ ಮಾಡಲಾಗಿರುತ್ತದೆ. ಸದರಿ ಅವಧಿಯಲ್ಲಿ ನಾನು ಯಾವುದೇ ಅಧಿಕಾರದಲ್ಲಿ ಇರುವುದಿಲ್ಲ. ಅದ್ದರಿಂದ ಇದರಲ್ಲಿ ನನ್ನ ಪಾತ್ರ ಇರುವುದಿಲ್ಲ. 2012ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಲ್ಲಿ ನನ್ನ ಹೆಂಡತಿ ಅಂಬುಜಮ್ಮ ಇವರನ್ನು ಫಲಾನುಭವಿಯನ್ನಾಗಿ ಆಯ್ಕೆ ಮಾಡಲಾಗಿರುತ್ತದೆ. ಸದರಿ ಪ್ರಕ್ರಿಯೆಯನ್ನು

ನಿಯಮಾನುಸಾರ ಅಂದಿನ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಹಾಲಮ್ಮ ಮತ್ತು ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ನಿಷ್ಪಕ್ಷವಾಗಿ ಫಲಾನುಭವಿಯನ್ನಾಗಿ ಆಯ್ಕೆ ಮಾಡಿರುತ್ತಾರೆ. ಸದರಿ ಪ್ರಕ್ರಿಯೆಯ ಫಲಾನುಭವಿಗಳನ್ನು ನಿಯಮಾನುಸಾರ ಆಯ್ಕೆ ಮಾಡುವ ಅಧಿಕಾರ ತಾಲ್ಲೂಕಿನ ಶಾಸಕರಾಗಿದ್ದು ಸದರಿಯವರೇ ನಿಯಮಾನುಸಾರ ಫಲಾನುಭವಿಯನ್ನಾಗಿ ಆಯ್ಕೆ ಮಾಡಿರುತ್ತಾರೆ. ಈ ಅವಧಿಯಲ್ಲಿ ನಾನು ಸಾಮಾನ್ಯ ಸದಸ್ಯನಾಗಿದ್ದು, ಇದರಲ್ಲಿ ನನ್ನ ಅಧಿಕಾರದ ಯಾವುದೇ ಹಸ್ತಕ್ಷೇಪ ಇರುವುದಿಲ್ಲ. ನನಗೆ ಫಲಾನುಭವಿಗಳನ್ನು ಆಯ್ಕೆ ಮಾಡುವ ಯಾವುದೇ ಅಧಿಕಾರವನ್ನು ಪಂಚಾಯತಿ ವತಿಯಿಂದ ನೀಡಿರುವುದಿಲ್ಲ.

ನಮ್ಮ ಗ್ರಾಮದಲ್ಲಿ ನನ್ನ ಕುಟುಂಬದ ರಕ್ತ ಸಂಬಂಧಿಗಳು ಸಾಕಷ್ಟು ಸಂಖ್ಯೆಯಲ್ಲಿರುತ್ತಾರೆ. ಇವರೂ ಸಹ ಸರ್ಕಾರದ ವಿವಿಧ ಯೋಜನೆಗಳಿಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸಿದ್ದು 2012ನೇ ಸಾಲಿನಲ್ಲಿ ನನ್ನ ತಮ್ಮನಾದ ಸಣ್ಣ ಹಳದಪ್ಪ ನವರ ಹೆಂಡತಿ ಸರಸ್ವತಮ್ಮ ಇವರನ್ನು ಅಂದಿನ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಹಾಲಮ್ಮ ಮತ್ತು ಇಲಾಖೆಯ ಅಧಿಕಾರಿಗಳು ನಿಯಮಾನುಸಾರ ಫಲಾನುಭವಿಯನ್ನಾಗಿ ಆಯ್ಕೆ ಮಾಡಿರುತ್ತಾರೆ. ಈ ಅವಧಿಯಲ್ಲಿ ನಾನು ಸಾಮಾನ್ಯ ಸದಸ್ಯನಾಗಿದ್ದು ಇದರಲ್ಲಿ ನನ್ನ ಅಧಿಕಾರದ ಯಾವುದೇ ಹಸ್ತಕ್ಷೇಪ ಇರುವುದಿಲ್ಲ.

2013ನೇ ಸಾಲಿನಲ್ಲಿ ಇಂದಿರಾ ಆವಾಜ್ ಯೋಜನೆಯಲ್ಲಿ ನನ್ನ ತಮ್ಮನಾದ ಮಹೇಶ್ವರಪ್ಪ ನವರ ಹೆಂಡತಿ ಶೀಲಾ ಫಲಾನುಭವಿಯಾಗಿ ಆಯ್ಕೆಯಾಗಿದ್ದು ಕಾರಣಾಂತರಗಳಿಂದ ಯೋಜನೆಯ ಸೌಲಭ್ಯ ಪಡೆದುಕೊಂಡಿರುವುದಿಲ್ಲ. ಪುನಃ ಮಹೇಶ್ವರಪ್ಪ ನವರ ಹೆಂಡತಿ ಶೀಲಾ ಇವರನ್ನು 2013-14 ನೇ ಸಾಲಿನ ಬಸವ ವಸತಿ ಯೋಜನೆಯಲ್ಲಿ ಅಂದಿನ ಅಧ್ಯಕ್ಷರಾದ ಅನಿತಾ, ಕಾರ್ಯನಿರ್ವಾಹಕ ಅಧಿಕಾರಿಗಳು ನಿಯಮಾನುಸಾರ ಆಯ್ಕೆ ಮಾಡಿರುತ್ತಾರೆ. ಈ ಅವಧಿಯಲ್ಲಿ ನಾನು ಸಾಮಾನ್ಯ ಸದಸ್ಯನಾಗಿದ್ದು ಇದರಲ್ಲಿ ನನ್ನ ಅಧಿಕಾರದ ಯಾವುದೇ ಹಸ್ತಕ್ಷೇಪ ಇರುವುದಿಲ್ಲವೆಂದು ತಿಳಿಸಿರುತ್ತಾರೆ".

ಮೇಲೆ ಓದಲಾದ (4)ರಲ್ಲಿ ಶ್ರೀ ಕೆ ನಾಗರಾಜಪ್ಪ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಾಲಯದಲ್ಲಿ ದಿನಾಂಕ:28-12-2017 ರಂದು ಜರುಗಿದ ವಿಚಾರಣೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೊನ್ನಾಳಿ ಹಾಗೂ ಆಪಾದಿತ ಅಧ್ಯಕ್ಷರು ಹಾಜರಿರುತ್ತಾರೆ.

ಸರ್ಕಾರವು ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ಸಾಕ್ಷ್ಯಾಧಾರಗಳು, ದಾಖಲಾತಿಗಳನ್ನು ಪರಿಶೀಲಿಸಲಾಗಿ, ಇದು ಹಿಂದಿನ ಅವಧಿಯಲ್ಲಿ ನಡೆದಿರುವ ಪ್ರಕರಣವಾಗಿದ್ದು, ಪ್ರಸ್ತುತ ಇವರ ಸದಸ್ಯತ್ವ ರದ್ದುಪಡಿಸಲು ಉಚ್ಚ ನ್ಯಾಯಾಲಯದ ಆದೇಶದಲ್ಲಿ ಕ್ರಮ ಇರುವುದಿಲ್ಲ. ಆದಾಗ್ಯೂ ನಿಯಮಬಾಹಿರವಾಗಿ ಸರ್ಕಾರದ ಸೌಲಭ್ಯ ಎರಡು ಬಾರಿ ಪಡೆದಿರುವುದರಿಂದ ಅವರ ಮೇಲೆ ಬಡ್ಡಿ ಸಮೇತ ವಸೂಲಾತಿಗೆ ಹಾಗೂ ಕಾನೂನಾತ್ಮಕ ಕ್ರಮ ಕೈಗೊಳ್ಳುವಂತೆ ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 825 ಗ್ರಾಪಂಅ 2017 ಬೆಂಗಳೂರು, ದಿನಾಂಕ:07-03-2018.**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಕೆ ನಾಗರಾಜಪ್ಪ, ಅಧ್ಯಕ್ಷರು, ಟಿ.ಗೋಪಗೊಂಡನಹಳ್ಳಿ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ಹಿಂದಿನ ಅವಧಿಯಲ್ಲಿ ನಡೆದಿರುವ ಪ್ರಕರಣವಾಗಿದ್ದು, ಪ್ರಸ್ತುತ ಇವರ ಸದಸ್ಯತ್ವ ರದ್ದುಪಡಿಸಲು ಉಚ್ಚ ನ್ಯಾಯಾಲಯದ ಆದೇಶದಲ್ಲಿ ಕ್ರಮ ಇರುವುದಿಲ್ಲ. ಆದಾಗ್ಯೂ

ನಿಯಮಬಾಹಿರವಾಗಿ ಸರ್ಕಾರದ ಸೌಲಭ್ಯ ಎರಡು ಬಾರಿ ಪಡೆದಿರುವುದರಿಂದ ಅವರ ಮೇಲೆ ಬಡ್ಡಿ ಸಮೇತ ವಸೂಲಾತಿಗೆ ಹಾಗೂ ಕಾನೂನಾತ್ಮಕ ಕ್ರಮ ಕೈಗೊಳ್ಳುವಂತೆ ಸರ್ಕಾರವು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ

7/3

**(ಮುಬಾರಕ್ ಅಹ್ಮದ್)**

ಉಪನಿರ್ದೇಶಕರು ಹಾಗೂ ಪದನಿಮಿತ್ತ

ಸರ್ಕಾರದ ಅಧೀನ ಕಾರ್ಯದರ್ಶಿ,

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ.

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರೆ ಜಿಲ್ಲೆ.
2) ಕಾರ್ಯನಿರ್ವಾಹಕ ಅಧಿಕಾರಿ, ಹೊನ್ನಾಳಿ ತಾಲ್ಲೂಕು ಪಂಚಾಯತಿ, ದಾವಣಗೆರೆ ಜಿಲ್ಲೆ.
3) ಶ್ರೀ ಕೆ ನಾಗರಾಜಪ್ಪ, ಅಧ್ಯಕ್ಷರು, ಟಿ.ಗೋಪಗೊಂಡನಹಳ್ಳಿ ಗ್ರಾಮ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಟಿ.ಗೋಪಗೊಂಡನಹಳ್ಳಿ ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
5) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.
6) ಗಣಕ ಕೋಶ.